# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 631(732)
ಸದಸ್ಯರ ಹೆಸರು : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 20-12-2021.
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಚಿತ್ರಕಲಾ ಶಿಕ್ಷಕರ ನೇಮಕಾತಿ ಆಗಿದ್ದು ಯಾವಾಗ; ಎಷ್ಟು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆ; ಪ್ರಸ್ತುತ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಎಷ್ಟು ಹುದ್ದೆಗಳಿಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ: | ಸರ್ಕಾರಿ ಪ್ರೌಢಶಾಲೆಗಳಲ್ಲಿ 2007-2008ನೇ ಸಾಲಿನಲ್ಲಿ 522 ಚಿತ್ರಕಲಾ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ.<br>ಪ್ರಸ್ತುತ ಒಟ್ಟು 339 ಚಿತ್ರಕಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಆ) | ಚಿತ್ರಕಲಾ ಶಿಕ್ಷಕರಿಗೆ ಈ ಹಿಂದೆ ಯಾವಾಗ ಬಡ್ತಿ ನೀಡಲಾಗಿತ್ತು; ಎಷ್ಟು ಹುದ್ದೆಗಳಿಗೆ ಬಡ್ತಿ ನೀಡಲಾಗಿತ್ತು; ಪ್ರಸ್ತುತ ಬಡ್ತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ; ಎಷ್ಟು ಹುದ್ದೆಗಳಿಗೆ ಬಡ್ತಿ ನೀಡಲಾಗುವುದು; (ವಿಭಾಗವಾರು ಮಾಹಿತಿ ನೀಡುವುದು) ಇಲ್ಲವಾದಲ್ಲಿ, ಬಡ್ತಿ ನೀಡಲು ಇರುವ ಸಮಸ್ಯೆಗಳೇನು; ಈ ಸಮಸ್ಯೆಗಳನ್ನು ಪರಿಹರಿಸಿ ಬಡ್ತಿ ನೀಡಲಾಗುವುದೇ? | ದಿನಾಂಕ:11.02.2008ರಲ್ಲಿಸರ್ಕಾರಿ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರುಗಳಿಗೆ ಗ್ರೂಪ್ "ಸಿ" ವೃಂದದ ವಿಭಾಗೀಯ ಹಿರಿಯ ವಿಷಯ ಪರಿವೀಕ್ಷಕರು (ಚಿತ್ರಕಲೆ), ಕಲಾವಿದರು, ಕಲಾ ಬೋಧಕರು ವೃಂದದ ಒಟ್ಟು 9 ಹುದ್ದೆಗಳಿಗೆ ಬಡ್ತಿ ನೀಡಲಾಗಿದೆ.<br>ಸರ್ಕಾರಿ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರಿಗೆ ಗ್ರೂಪ್ ಬಿ ವೃಂದದ ವಿಭಾಗೀಯ ಹಿರಿಯ ವಿಷಯ ಪರಿವೀಕ್ಷಕರು(ಚಿತ್ರಕಲೆ), ಕಲಾವಿದರು, ಕಲಾ ಬೋಧಕರ ಹುದ್ದೆಗಳಿಗೆ ಮುಂಬಡ್ತಿ ನೀಡುವ ಕುರಿತು ಸಮಗ್ರ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಮಾಡುವ ಕುರಿತು ಪರಿಶೀಲನೆಯಲ್ಲಿದೆ. |

ಸಂಖ್ಯೆ: ಇಪಿ 115 ಎಲ್ ಬಿಪಿ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು